# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 561 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಟಿ ರವಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13-12-2024 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಜಾತಿಗಣತಿ ವರದಿಯನ್ನು ಸರ್ಕಾರ ಸ್ವೀಕರಿಸಿದ್ದು ಯಾವಾಗ; ಜಾತಿ ಗಣತಿ ನಡೆಸಲು ಆಗಿರುವ ವೆಚ್ಚ ಎಷ್ಟು; ಜಾತಿ ಗಣತಿಯನ್ನು ವೈಜ್ಞಾನಿಕವಾಗಿ ನಡೆಸಲಾಗಿದೆಯೇ; ಜಾತಿ ಗಣತಿಗಾಗಿ ಒಟ್ಟು ಎಷ್ಟು ಮನೆಗಳಿಗೆ ಭೇಟಿ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) | ಶ್ರೀ ಕೆ.ಜಯಪ್ರಕಾಶ ಹೆಗ್ಡೆ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ದತ್ತಾಂಶಗಳ ಅಧ್ಯಯನ ವರದಿ-2024ರ ವರದಿಯು ದಿನಾಂಕ: 29.02.2024 ರಂದು ಸ್ವೀಕೃತವಾಗಿರುತ್ತದೆ.<br><br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ಸಮೀಕ್ಷೆಗಾಗಿ ನವೆಂಬರ್ 2024ರ ಅಂತ್ಯಕ್ಕೆ ರೂ.165.51 ಕೋಟಿಗಳನ್ನು ವೆಚ್ಚ ಮಾಡಲಾಗಿರುತ್ತದೆ.<br><br>ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮೇಲುಸ್ತುವಾರಿಯಲ್ಲಿ ಜಿಲ್ಲಾಡಳಿತಗಳ ಸಹಯೋಗದೊಂದಿಗೆ, 2015ನೇ ಸಾಲಿನಲ್ಲಿ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ಕೈಗೊಳ್ಳಲಾಗಿರುತ್ತದೆ.<br><br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ರಾಜ್ಯಾದ್ಯಂತ 1.35 ಕೋಟಿ ಕುಟುಂಬಗಳನ್ನು ಸಂಪರ್ಕಿಸಿ ಮಾಹಿತಿಯನ್ನು ಸಂಗ್ರಹಿಸಿ ಗಣಕೀಕರಣಗೊಳಿಸಲಾಗಿರುತ್ತದೆ. |
| ಆ) | ಈ ವರದಿಯನ್ನು ಸರ್ಕಾರ ಅಂಗೀಕರಿಸಿದೆಯೇ; ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಕುರಿತು ನಡೆದಿರುವ ಚರ್ಚೆ ಏನು; ಕೈಗೊಂಡಿರುವ ತೀರ್ಮಾನವೇನು; | ಶ್ರೀ ಕೆ.ಜಯಪ್ರಕಾಶ ಹೆಗ್ಡೆ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು "ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ದತ್ತಾಂಶಗಳ ಅಧ್ಯಯನ ವರದಿ-2024" ವರದಿಯು ಪರಿಶೀಲನೆಯಲ್ಲಿರುತ್ತದೆ. |
| ಇ) | ಜಾತಿಗಣತಿ ವರದಿಯು ಸ್ವೀಕಾರಕ್ಕೆ ಅರ್ಹವಲ್ಲವೆಂದೂ ಅವೈಜ್ಞಾನಿಕವೆಂದು ಸಚಿವರು, ಶಾಸಕರುಗಳು ಹಾಗೂ ಸಮಾಜ ವಿವಿಧ ಸ್ವಾಮಿಜಿಗಳು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಜಾತಿಗಣತಿ ಸ್ವೀಕಾರ ಕುರಿತು ಸರ್ಕಾರದ ನಿಲುವೇನು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮೇಲುಸ್ತುವಾರಿಯಲ್ಲಿ ಜಿಲ್ಲಾಡಳಿತಗಳ ಸಹಯೋಗ ದೊಂದಿಗೆ, 2015ನೇ ಸಾಲಿನಲ್ಲಿ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿರುತ್ತದೆ. ಸದರಿ ಸಮೀಕ್ಷೆಯಲ್ಲಿ 54 ಮಾನದಂಡಗಳನ್ನೊಳಗೊಂಡ ನಮೂನೆ-3 ರಲ್ಲಿ ಮಾಹಿತಿಯನ್ನು ಮನೆ-ಮನೆಗೆ ಭೇಟಿ ನೀಡಿ ದತ್ತಾಂಶಗಳನ್ನು ವೈಜ್ಞಾನಿಕವಾಗಿ ಸಂಗ್ರಹಿಸಲಾಗಿರುತ್ತದೆ. "ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ದತ್ತಾಂಶಗಳ ಅಧ್ಯಯನ ವರದಿ-2024" ವರದಿಯು ದಿನಾಂಕ:29.02.2024ರಂದು ಸ್ವೀಕೃತವಾಗಿರುತ್ತದೆ. |

...2..

| | | |
|---|---|---|
| ಈ) | ರಾಜ್ಯ ಸರ್ಕಾರಗಳು ಜಾತಿಗಣತಿ ನಡೆಸಲು ಸಂವಿಧಾನದಲ್ಲಿ ಅವಕಾಶ ಇದೆಯೇ; ಜಾತಿ ಗಣತಿ ಸ್ವೀಕಾರ/ಅಂಗೀಕಾರ ಕುರಿತು ನ್ಯಾಯಾಲಯ ನೀಡಿರುವ ಸೂಚನೆ ಏನು? | ದಿನಾಂಕ:16.11.1992ರಂದು ನೀಡಿದ ಮಂಡಲ್ ವರದಿಗೆ ಸಂಬಂಧಿಸಿದ ತೀರ್ಪಿನಲ್ಲಿ ಸರ್ವೋಚ್ಛ ನ್ಯಾಯಾಲಯವು ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆಯಾಗಬೇಕು ಎಂಬುದಾಗಿ ಆದೇಶಿಸಿದೆ. ಅದಕ್ಕನುಗುಣವಾಗಿ ಕರ್ನಾಟಕದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1995 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್ ಡಬ್ಲ್ಯೂಡಿ 164 ಬಿಸಿಎ 97 ದಿನಾಂಕ:29.11.1997ರನ್ವಯ ದಿನಾಂಕ: 01.12.1997ರಂದು ಜಾರಿಗೆ ಬಂದಿರುತ್ತದೆ.<br><br>ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995 ರ ಕಲಂ 9 (1) (ii) ಕ್ಕೆ ದಿನಾಂಕ: 02.09.2014ರಂದು ತಿದ್ದುಪಡಿ ಆದೇಶದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 5 ಶಾಸನ 2014 ಬೆಂಗಳೂರು ದಿನಾಂಕ:06.09.2014ರಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.<br><br>**9ನೇ ತಿದ್ದುಪಡಿ:-** ಮೂಲ ಅಧಿನಿಯಮದ 9ನೇ ಪ್ರಕರಣದ (1)ನೇ ಉಪ ಪ್ರಕರಣದ (ii) ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-<br><br>"(ii) ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ನಡೆಸುವುದು, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ನಾಗರಿಕರ ವರ್ಗಗಳನ್ನು ಗುರುತಿಸುವುದು ಮತ್ತು ಅವಶ್ಯಕ ಕ್ರಮಗಳನ್ನು ತೆಗೆದುಕೊಳ್ಳುವುದಕ್ಕಾಗಿ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು".<br><br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ವರದಿ ಕುರಿತಂತೆ ರಾಜ್ಯದ ಉಚ್ಛ ನ್ಯಾಯಾಲಯದಲ್ಲಿ WP No.13803/2021(GM-RES)PIL ಮತ್ತು WP No. 7619/2024 ಪ್ರಕರಣಗಳು ದಾಖಲಾಗಿದ್ದು,ವಿಚಾರಣಾ ಹಂತದಲ್ಲಿರುತ್ತವೆ. |

**<u>ಸಂಖ್ಯೆ</u>:ಹಿಂವಕ 350 ಬಿಸಿಎ 2024**

**(ಶಿವರಾಜ.ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು